ಷರತ್ತುಗಳು—ಸರ್ಕಾರದ ಹರಾಜ್ ಖೈದಾಜ ಕೂಡ್ಲೆ ಚಡ ದರಖಾಸ್ತುದಾರನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂ ಪಾಯಿ ಶೇವಣಿಯನ್ನು ಪಾವತಿ ಮಾಡತಕ್ಕದ್ದು, ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳ ವಳಗಾಗಿ ಪಾವತಿಯಿಂದ ಆನೆಯನ್ನು ತೆಗದುಕೊಂಡು ಹೋಗತಕ್ಕದ್ದು, ಇದಕ್ಕೆ ತಪ್ಪಿದಲ್ಲಿ ಶೇವಣಿ ಮೊಬಲಗು ಸರಕಾರಕ್ಕೆ ದಾಖಲ್ಮಾಡಿಕೊಳ್ಳಲಾಗುತ್ತೆ, ಮತ್ತು ಸದರೀ ಆನೆಗಳು ಪುನಹ ಹರಾಜು ಮಾಡುವದರಲ್ಲಿ ಉಂಟಾಗಬಹುದಾದ ನುಕಸಾನಿಗೆ ಮೊದಲ್ ದರಖಾಸ್ತುದಾರನ್ನ ಗುರಿಮಾಡಲಾಗುತ್ತೆ, ನಫೆ ಬಂದಲ್ಲಿ ದರಖಾಸ್ತುದಾರನಿಗೆ ಕೊಡಲಾಗುವದಿಲ್ಲ. ದರಖಾಸ್ತುದಾರರು ಅವರು ಪಡಕೊಂಡ ಆನೆಗಳಿಗೆ ಹರಾಜ್ ತಾರೀಖು ಲಾಗಾಯತು ತಗಲುವ ಖರ್ಚು ವಹಿಸಬೇಕು.

ಬಿ. ರಾಮಸ್ವಾಮಯ್ಯರ್,
ಅಫಿಷಿಯೇಟಿಂಗ್ ಅಸಿಸ್ಟೆಂಟ್ ಕಲೆಕ್ಟರ್ವೇಟರ್.

ಪ್ರಸಿದ್ಧ ಪತ್ರಿಕೆ.

ಶ್ರೀಮನ್ಮಹಾರಾಜ ಚಾಮರಾಜೇಂದ್ರ ಒಡೆಯರ್ ಬಹದ್ದೂರ್ ಜಿ. ಸಿ. ಎಸ್. ಐ. ಮಹಾಸ್ವಾಮಿಯವರ ಆಜ್ಞಾನುಸಾರ, ಆಳಿದ ಮಹಾಸ್ವಾಮಿಯವರಾದ ಶ್ರೀಕೃಷ್ಣರಾಜ ಒಡೆಯರ್ ಬಹದ್ದೂರವರಿಂದ ಕರ್ಣಾಟಕ ಭಾಷೆಯಲ್ಲಿ ವಾಕ್ಯರೂಪವಾಗಿ ವಿರಚಿತವಾದ, ಶ್ರೀಕೃಷ್ಣರಾಜ ವಾಣೀವಿಲಾಸವೆಂಬ ಶ್ರೀಮನ್ಮಹಾಭಾರತದ ಕನ್ನಡದ ಟೀಕನ್ನು ಲೋಕೋಪಕಾರಾರ್ಥವಾಗಿರುವಂತೆ, 1884–85ನೇ ಇಸವಿಯಲ್ಲಿ ಮೈಸೂರು ಅರಮನೆಯ ಜಗನ್ಮೋಹನ ಮುದ್ರಾಕ್ಷರ ಶಾಲೆಯಲ್ಲಿ ವಿರಾಟಪರ್ವವನ್ನೂ ಉದ್ಯೋಗಪರ್ವವನ್ನೂ ಮುದ್ರಿಸಿ ಪ್ರಚಾರಪಡಿಸಿರುವ ವಿಷಯವು ಸರ್ವರಿಗೂ ವಿದಿತವಾಗಿರುವದಷ್ಟೆ.

ಶ್ರೀಮನ್ಮಹಾರಾಜರವರ ಆಜ್ಞೆಯಂ ಪಡೆದು ಉಳಿದಿದ್ದ ಹದಿನಾರು ಪರ್ವಗಳಲ್ಲಿ ಆದಿಪರ್ವವೂ ಸಭಾಪರ್ವವೂ ಬೆಂಗಳೂರಲ್ಲಿರುವ ಚಾಮುಂಡೇಶ್ವರಿ ಮುದ್ರಾಶಾಲೆಯಲ್ಲಿ ಮುದ್ರಿಸಲ್ಪಟ್ಟು ಈಗ ಕ್ರಯಕ್ಕೆ ಸಿದ್ಧವಾಗಿರುತ್ತದೆ.

ಈಗ ನಮ್ಮಲ್ಲಿ ಕರ್ಣಪರ್ವವು ಮುದ್ರಿಸಲ್ಪಟ್ಟು ಕ್ರಯಕ್ಕೆ ಸಿದ್ಧವಾಗಿರುತ್ತದೆ. ಇದರ ಕ್ರಯವು ಪ್ರತಿ ಬಂದಕ್ಕೆ ರೂಪಾಯಿ 1—12—0, ಟಪಾಲ್ ಹಾಸಲ್ ಸಹಿತ ರೂಪಾಯಿ 2—0—0, ಬೇಕಾದವರು ಈ ಕೆಳಗೆ ರುಜು ಮಾಡಿರುವವರಿಗೆ ಕ್ರಯವನ್ನು ಕಳುಹಿಸಿ ಬರೆದರೆ ಪುಸ್ತಕವು ದೊರಿಯುತ್ತದೆ. ಈಗ ಅರಣ್ಯಪರ್ವವು ಮುದ್ರಣೆಯಲ್ಲಿರುತ್ತದೆ.

ಮೈಸೂರು,
16ನೇ ಏಪ್ರಿಲ್ 1890.

ಬಿ. ಚಿ. ರಾಜಪ್ಪ,
ಮೈಸೂರಲ್ಲಿರುವ ಸರಕಾರದ ಬ್ಯಾಂಕ್ ಮುದ್ರಾಶಾಲೆಯ ಫೋರ್ಮ್ಯಾನ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನ್‌ಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥವಾಗಿ ಗವರ್ಮೆಂಟ್ ಆಫಿಸರ್‌ಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಗಳು ತಗದುಕೊಳ್ಳುವಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 3—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 7—4—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 14—0—0; ಬೊಟಾನಿಕಲ್ ಗಾರ್ಡನ್ ಸೂಪರ್ಟಿಂಟೆಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಬದಗಿಸಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ. 4—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 9—4—0; ಬಂದು ಪೌಂವುಳ್ಳ ಡಬ್ಬಿಗೆ 17 ರೂ. 8 ಆಣೆ, ಈ ಔಷಧವು ಕಲ್ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ ವ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ, ಸದರೀ ಕಿಮ್ಮತಿನೊಂದಿಗೆ ದರ 4 ಔನ್ಸ್ ತಗರದ ಡಬ್ಬಿಗೆ 4 ಆಣೆಯೂ, 8 ಔನ್ಸ್ ತಗರದ ಡಬ್ಬಿಗೆ 8 ಆಣೆ ಟಪ್ಪಾಲ್ ಹಾಸಲೂ, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.

ಮೈಸೂರ ಗೆಜೆಟ್ ಚಂದಾ ದರ ವಗೈರೆ.

ತಾರೀಖು 26ನೇ ಜನವರಿ 1889.

ಮೈಸೂರು ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ. ಮತ್ತು ಸದರೀ ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟೀಸು ಮುಂತಾದವುಗಳು ಬೆಂಗಳೂರಲ್ಲಿರುವ ಮೈಸೂರು ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ. ರೂ. ಆ.	ಟಪ್ಪಾಲ್ ಹಾಸಲು ಮೈಸೂರು ಶಿವಾಯಿ ಇತರೆ ಸ್ಥಳಗಳಿಗೆ. ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8

ಛಪ್ ಮಾಹೇ ಯಾ ಕ್ವಾರ್ಟರಿಗೆ ದಾಮಾಷಾಯಿ ಪ್ರಕಾರ ರೂ. ಆ.

ಚಾಲತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಷ ಯಾ ಆಕ್ಟ್ಯುಗಳು ಯಾವದೂ ಇಲ್ಲದಿದ್ದರೆ. 0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತೆಗೆದುಕೊಳ್ಳಬಹುದು.

ಸಿವಿಲ್ ಕೋರ್ಟಿನಿಂದ ಕೊಡಲ್ಪಡುವ, 1860ನೇ ಇಸವಿ XXVIIನೇ ಆಕ್ಟ್ಯು ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸುಗಳು:—

ಮೊದಲನೇ ದಫಾ ಫೈಯಿಷ್ ಮಾಡತಕ್ಕ ಬಗ್ಯೆ (ಇಂಗ್ಲೀಷು ಅಥವಾ ಕನ್ನಡ) .. 2 8

ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ 1 4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷರ್ಷ ಅನುಸರಿಸಿ ದಿವಾಳೀ ಅಪ್ಲಿಕೇರ್ಷಗಳ ಬಗ್ಯೆ ನೋಟೀಸುಗಳಿಗೆ:—

ಮೊದಲನೇ ಸಲಕ್ಕೆ 5 0

ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ 2 8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷರ್ಷ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳೀ ಹುಕ್ಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತ್ತವೆ.

ಜ್ಯೂಡಿಷಿಕೇಟ್ ಕಾಪೀಪಟ್ಟೆ ವಗೈರೇ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ .. ಪುಟ 1ಕ್ಕೆ .. 10 0

ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ „ .. 5 0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ ಪಬ್ಲಿ 1ಕ್ಕೆ .. 0 8

ಎರಡನೇ ದಫಾ ಡಿಟೋ ಡಿಟೋ .. 0 6

ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ 0 4

ಪರಾ.—ಚಂದಾ ವಗೈರೇ ಬಗ್ಯೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ಎಂದಾಣೆ ಯಂತೆ ಪೋಸ್ಟೇ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ನಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ಮೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರು ದಿವಾನರವರ ಚೀಫ್ ಸೆಕ್ರಿಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜೂ ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಗಾಯತು ಒಂದು ವಾರದ ಪೊಳಗಾಗಿ ತಿಳಿಸಲ್ಪಡಬೇಕು.

ಮೈಸೂರು ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳು ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಗುರುವಾರ ದಿವಸ ಸಾಯಂಕಾಲ 5 ಘಂಟೆ ವಳಗಾಗಿ ಕಂಪ್ಟ್ರೊಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರ್ ಯಿಲ್ಲ.

ಟಿ. ಓ. ಲೆನಾರ್ಡ್,
ಸ್ಯೆ. ಗೆ. ಕಂಪ್ಟ್ರೊಲರ್.

Mysore Govt. Central Press, Bangalore—1890.